ಕರ್ನಾಟಕ ಸರ್ಕಾರ

# ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯವರ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉರ್ವಸ್ಟೋರ್ ರೇಡಿಯೋ ಪಾರ್ಕ್ ಮಂಗಳೂರು

ಸಂಖ್ಯೆ:ಹಿಂವಕಇ/ಮಂ/ವಿವಿ/ಸೇರ್ಪಡೆ/ಸಿಆರ್53/2020-21 ದಿನಾಂಕ : 19-07-2021

ದೂರವಾಣಿ ಸಂಖ್ಯೆ : 0824-2453650

ರಿಗೆ,

ಉಪ ನಿರ್ದೇಶಕರು,
ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ,
ದ.ಕ. ಜಿಲ್ಲೆ ಮಂಗಳೂರು

ಮಾನ್ಯರೇ,

ವಿಷಯ: 2020-21 ನೇ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, "ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ" ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ

******

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21 ನೇ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, "ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ" ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಿದೆ. ಈ ಪತ್ರಕ್ಕೆ ಲಗತ್ತಿಸಿರುವ ಪ್ರಕಟಣೆಯನ್ನು ಜಿಲ್ಲಾ ಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಉಚಿತವಾಗಿ ಪ್ರಕಟಿಸಲು ವಿನಂತಿಸಲಾಗಿದೆ.

ತಮ್ಮ ವಿಶ್ವಾಸಿ,

Mahalaxmi Bolar

ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಮಂಗಳೂರು ತಾಲೂಕು

ಪ್ರತಿಯನ್ನು

1. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆನೆಗುಂಡಿ, ಮಂಗಳೂರು ಇವರಿಗೆ ಮಾಹಿತಿಗಾಗಿ ಕಳಿಸಿಕೊಡಲಾಗಿದೆ.
2. ಕಛೇರಿ ಕಡತಕ್ಕೆ

# "ಪ್ರಕಟಣೆ"

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2020-21ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಮತ್ತು "ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ" ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 20-06-2021 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ಕೋವಿಡ್-19 ಸೊಂಕಿತ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಲಾಕ್‌ಡೌನ್ ಘೋಷಣೆಯಾದ ಕಾರಣ ಶಾಲಾ ಕಾಲೇಜುಗಳಿಗೆ ರಜೆಯನ್ನು ಘೋಷಿಸಿರುವುದರಿಂದ ವಿದ್ಯಾರ್ಥಿಗಳು ಇ-ಅಟೆಷ್ಟೇಷನ್ ಮಾಡಿಸುವುದು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ ಈಗಾಗಲೇ ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಪ್ರಾರಂಭಗೊಳಿಸಿದ್ದು, ಅರ್ಜಿಯನ್ನು ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಹಿಸುವಂತೆ **(ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ)** ಕೊನೆಯ ದಿನಾಂಕವನ್ನು 25-07-2021ರವರೆಗೆ ವಿಸ್ತರಿಸಲಾಗಿದೆ.

| | | |
|---|---|---|
| • ಅರ್ಜಿಸಲ್ಲಿಸಲು ಕೊನೆಯ ದಿನಾಂಕ | : | 25-07-2021 |
| • ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ | : | www.ssp.postmatric.karnataka.gov.in |
| • ಕಾರ್ಯಕ್ರಮಗಳ ವಿವರ, ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ | : | www.bcwd.karnataka.gov.in |
| • ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ<br>ಇಮೇಲ್ | :<br>: | 8050770005/8050770004<br>bcwd.scholarship@karnataka.gov.in |
| • ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್<br>ದೂರವಾಣಿ ಸಂಖ್ಯೆ | :<br>: | postmatrichelp@.karnataka.gov.in<br>080-35254757 |

ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಮಂಗಳೂರು ತಾಲೂಕು. ದ.ಕ ಜಿಲ್ಲೆ